RNU AIR DHARWAD

# AUGUST 17, 2025
# AKASHAVANI - DHARWAD
# PRADESH SAAMACHARA (KANNADA) 7.05 A.M

<><><>

**ಮುಖ್ಯಾಂಶಗಳು**

- **ಧರ್ಮಸ್ಥಳದ ವಿಚಾರದಲ್ಲಿ ಷಡ್ಯಂತ್ರ; ಮಧ್ಯಂತರ ವರದಿ ಪಡೆಯುವಂತೆ ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹ.**
- **ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ಸಿದ್ಧಪಡಿಸಿ ಸೆಪ್ಟೆಂಬರ 30 ರ ಒಳಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವಂತೆ ಸಚಿವ ಎಚ್.ಕೆ.ಪಾಟೀಲ ಅಧಿಕಾರಿಗಳಿಗೆ ಸೂಚನೆ.**
- **ಕೋಲಾರ ಜಿಲ್ಲೆಯ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ 17 ಸ್ಥಾನಗಳಿಗೆ ಇಂದು ಚುನಾವಣೆ.**
- **ಸರ್ಕಾರದ ನಿಯಮಗಳನ್ನು ಪಾಲಿಸುವ ಮೂಲಕ ಗಣೇಶ ಚತುರ್ಥಿ ಹಬ್ಬ ಶಾಂತಿಯುುತವಾಗಿ ಆಚರಿಸುವಂತೆ ಜಿಲ್ಲಾಡಳಿತಗಳಿಂದ ಸಾರ್ವಜನಿಕರಲ್ಲಿ ಮನವಿ.**

## ಈಗ ವಾರ್ತೆಗಳ ವಿವರ

**ಧರ್ಮಸ್ಥಳದ ವಿಚಾರದಲ್ಲಿ ಬಹುಸಂಖ್ಯಾತ** ಸಮುದಾಯದ ಭಾವನೆಗಳನ್ನು ಹತ್ತಿಕ್ಕುವ ಕೆಲಸ ಮಾಡುತ್ತಿರುವುದು ಸರಿಯಲ್ಲ ಎಂದು ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಅಸ್ಮಿತೆ, ನಂಬಿಕೆಯನ್ನು ಹರಣ ಮಾಡುವ ಪ್ರಯತ್ನ ನಡೆಸಲಾಗಿದೆ. ಧರ್ಮಸ್ಥಳದಲ್ಲಿ ಅನಾಮಿಕ ತೋರಿಸಿದ 13 ಸ್ಥಳಗಳಲ್ಲಿ ಉತ್ಖನನ ಮಾಡಲಾಗಿದೆ. ಅಲ್ಲಿ ಏನು ದೊರೆತಿಲ್ಲ. ರಾಜ್ಯ ಸರ್ಕಾರ ತರಾತುರಿಯಲ್ಲಿ ವಿಶೇಷ ತನಿಖಾ ತಂಡ ರಚನೆ ಮಾಡಿ, ಬಹುಸಂಖ್ಯಾತರ ಭಾವನೆಗಳನ್ನು ಹತ್ತಿಕ್ಕುವ ಕೆಲಸ ಮಾಡಲಾಗುತ್ತಿದೆ ಎಂದರು. ದೂರುದಾರನ ಹಿನ್ನೆಲೆ ಏನು, ಇದುವರೆಗೂ ಏಕೆ ಆತನನ್ನು ಬಂಧಿಸಿಲ್ಲ. ಜೊತೆಗೆ ಎಫ್.ಐ.ಆರ್ ಕೂಡ ದಾಖಲು ಮಾಡಿಲ್ಲ ಎಂದು ಪ್ರಶ್ನಿಸಿದ ಅವರು, ಹಿಂದೂ ಭಾವನೆಗಳನ್ನು ಹತ್ತಿಕ್ಕಲು ರಾಜ್ಯ ಸರ್ಕಾರದಲ್ಲಿರುವ ಕೆಲವರು ಕೆಲಸ ಮಾಡುತ್ತಿದ್ದಾರೆ. ಧರ್ಮಸ್ಥಳದ ವಿಚಾರದಲ್ಲಿ ಷಡ್ಯಂತ್ರ ನಡೆದಿದೆ. ರಾಜ್ಯ ಸರ್ಕಾರ ಈ ಸಂಬಂಧ ಮಧ್ಯಂತರ ವರದಿ ತರಿಸಿಕೊಳ್ಳಬೇಕು. ದೂರುದಾರನನ್ನು ಬಂಧಿಸಬೇಕು ಎಂದು ಆಗ್ರಹಿಸಿದರು.

<><><>

**ವಾರ್ಡ ಸಭೆ, ಗ್ರಾಮ ಪಂಚಾಯತಿ ಸಭೆ ಮತ್ತು** ಸ್ಥಳಿಯ ಸಂಸ್ಥೆಗಳಲ್ಲಿ ವಾರ್ಡ ಸಭೆಗಳನ್ನು ಪೂರ್ಣಗೊಳಿಸಿ, ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ಸಿದ್ಧಗೊಳಿಸಿ ಸೆಪ್ಟೆಂಬರ 30 ರ ಒಳಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗದಗ ನಗರದ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ್ದ ಯೋಜನೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೆಳಹಂತದ ಅಧಿಕಾರಿಗಳಿಗೆ ಕರಡು ಪ್ರತಿ ಸಿದ್ಧತೆಯಲ್ಲಿ ಹಾಗೂ ಅಧಿಕಾರಿ ಕಾರ್ಯವ್ಯಾಪ್ತಿ ಏನು ಎಂಬುದರ ಕುರಿತು ಮಾರ್ಗಸೂಚಿ ಪ್ರತಿ ನೀಡುವ ಮೂಲಕ, ಅಧಿಕಾರಿಗಳಿಗೆ ತಿಳಿವಳಿಕೆ ನೀಡಬೇಕು ಎಂದರು.

<><><>

**ಕೋಲಾರ ಜಿಲ್ಲೆಯ** ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ 17 ಸ್ಥಾನಗಳಿಗೆ ಇಂದು ಬೆಳಗ್ಗೆ ಮತದಾನ 7 ಗಂಟೆಗೆ ಆರಂಭವಾಗಿದ್ದು, ಸಂಜೆ 5 ಗಂಟೆಯವರೆಗೆ ನಡೆಯಲಿದೆ. ಕಣದಲ್ಲಿ 51 ಜನ ಅಭ್ಯರ್ಥಿಗಳಿದ್ದಾರೆ. 17 ವಾರ್ಡ್‌ಗಳಿಗೆ ಇಬ್ಬರು ಚುನಾವಣಾಧಿಕಾರಿಗಳು ಮತ್ತು ಇಬ್ಬರು ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಲಾಗಿದೆ. ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ ವ್ಯಾಪ್ತಿಯಲ್ಲಿ 22 ಮತಗಟ್ಟೆಗಳನ್ನು ಸ್ಥಾಪಿಸಿದ್ದು, ಒಟ್ಟು 13 ಸಾವಿರದ 499 ಜನ ಮತದಾರರಿದ್ದಾರೆ. ಆಗಸ್ಟ್ 20 ರಂದು ತಾಲೂಕು ಕೇಂದ್ರದಲ್ಲಿ ಮತ ಎಣಿಕೆ ನಡೆಯಲಿದೆ. ಮತ ಗಟ್ಟೆಗಳ ಸುತ್ತ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎಂ.ಆರ್.ರವಿ ತಿಳಿಸಿದ್ದಾರೆ.

**<><><>**

**ಆಗಸ್ಟ್ 27 ರಂದು ರಾಯಚೂರು ಜಿಲ್ಲೆಯಲ್ಲಿ** ಗಣೇಶ ಚತುರ್ಥಿ ಹಬ್ಬವನ್ನು ಅರ್ಥಪೂರ್ಣವಾಗಿ, ಶಾಂತಿ ಸೌಹಾರ್ದಯುತವಾಗಿ ಆಚರಿಸಲು ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ ಮಾಡಿದ್ದಾರೆ. ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಶಾಂತಿಪಾಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಣ್ಣಿನಿಂದ ತಯಾರಿಸಿದ ಗಣೇಶ ವಿಗ್ರಹಗಳನ್ನು ಸ್ಥಾಪಿಸಿ ಸರ್ಕಾರ ನಿಗದಿಪಡಿಸಿದ ನಿಯಮಗಳನ್ನು ಪಾಲಿಸಬೇಕು. ಹಿರಿಯ ನಾಗರಿಕರು, ಮಕ್ಕಳು ಹಾಗೂ ಪ್ರಾಣಿಗಳಿಗೆ ತೊಂದರೆಯಾಗದಂತೆ ಶ್ರೀಗಣೇಶ ಮಂಡಳಿಗಳು ಮಾರ್ಗಸೂಚಿ ಪಾಲನೆಯ ಬಗ್ಗೆ ನಿಗಾವಹಿಸಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಸಹಕರಿಸಬೇಕು. ನಿಗದಿಗೊಳಿಸಿದ ಸಮಯದೊಳಗೆ ಮೂರ್ತಿಗಳನ್ನು ವಿಸರ್ಜಿಸಬೇಕು. ಮಾರ್ಗಸೂಚಿಯನ್ವಯ ಧ್ವನಿವರ್ಧಕ ಬಳಸಬೇಕು ಎಂದು ತಿಳಿಸಿದರು. ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಎಲ್ಲರೂ ತಪ್ಪದೇ ಪೂರ್ವ ಪರವಾನಿಗೆಯನ್ನು ಸಂಬಂಧಿಸಿದ ಇಲಾಖೆಯವರಿಂದ ಪಡೆಯಬೇಕು. ನಿಗದಿತ ನಮೂನೆಯಲ್ಲಿ ಮುಂಚಿತವಾಗಿ ಅರ್ಜಿ ಸಲ್ಲಿಸಬೇಕು. ಆಯೋಜಕರು ಸಲ್ಲಿಸುವ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗಳು ಜಂಟಿ ತಪಾಸಣೆ ಮಾಡಿ ನಿಯಮಾನುಸಾರ ಪರವಾನಿಗೆ ನೀಡಲು ಕ್ರಮ ವಹಿಸುತ್ತವೆ ಎಂದರು. **ಗಣೇಶ ಹಬ್ಬ ಅದ್ದೂರಿ ಆಚರಣೆಯಲ್ಲಿ ಬೆಳಗಾವಿ ಜಿಲ್ಲೆ** ಮುಂಚೂಣಿಯಲ್ಲಿದೆ. ಈ ನಿಟ್ಟಿನಲ್ಲಿ ಶಾಂತಿ, ಸೌಹಾರ್ದತೆಯ ಗಣೇಶ ಹಬ್ಬ ಆಚರಣೆಗೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ. ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ಗಣೇಶ ಉತ್ಸವದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಗಣೇಶ ಹಬ್ಬದ ಆಚರಣೆಯ ನೆಪದಲ್ಲಿ ಕಾನೂನುಬಾಹಿರ ಚಟುವಟಿಕೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು. ಪರಿಸರ ಹಾಳಾಗದಂತೆ ಮಣ್ಣಿನ ಮೂರ್ತಿಯ ಗಣಪತಿಗಳನ್ನು ಸ್ಥಾಪಿಸುವುದು ಅವಶ್ಯ, ಮೂರ್ತಿ ಸ್ಥಾಪನೆಯ ಮುನ್ನ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು. **ಪ್ರತಿ ವರ್ಷದಂತೆ ಈ ಬಾರಿಯೂ** ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ –ಪಿ.ಓ.ಪಿ ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸದೇ ಮಣ್ಣಿನ ಬಣ್ಣ ರಹಿತ ಗಣೇಶನನ್ನು ಪ್ರತಿಷ್ಠಾಪಿಸುವಂತೆ **ವಿಜಯನಗರ ಜಿಲ್ಲಾಧಿಕಾರಿ** ಎಂ.ಎಸ್.ದಿವಾಕರ್ ಸೂಚಿಸಿದ್ದಾರೆ. **ಗಣೇಶೋತ್ಸವ ಮತ್ತು ಈದ್** ಮಿಲಾದ್ ಹಬ್ಬವನ್ನು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಲು ಜಿಲ್ಲಾ ಪೊಲೀಸ್ ಇಲಾಖೆಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. **ದಾವಣಗೆರೆ** ನಗರಾದ್ಯಂತ 10 ಸಾವಿರ ಸಿಸಿ ಟಿವಿ ಕ್ಯಾಮರಗಳನ್ನು ಅಳವಡಿಸಲಾಗಿದ್ದು, ಪ್ರತಿಯೊಬ್ಬರ ಚಲನವಲನಗಳ ಮೇಲೆ ನಿಗಾವಹಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಹೇಳಿದ್ದಾರೆ.

**<><><>**

**ಈಗ ಪ್ರಕಟಣೆ. ನಂತರ ಪ್ರದೇಶ ಸಮಾಚಾರ ಮುಂದುವರಿಯುತ್ತದೆ**

**<><><>**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

**<><><>**

**ಬಾಳೆಹಣ್ಣು ಹುಡಿ–ಬಕಾಹು ಹಾಗೂ** ಸಿರಿಧಾನ್ಯಗಳನ್ನು ಬಳಸಿ, ಮೌಲ್ಯವರ್ಧಿತ ಉತ್ಪನ್ನಗಳನ್ನು ತಯಾರಿಸಿ ಮಾರಾಟ ಮಾಡಿ ಯಶಸ್ಸನ್ನು ಗಳಿಸಿದ್ದಾರೆ ಮೈಸೂರು ಜಿಲ್ಲೆಯ, ಹುಣಸೂರು ತಾಲೂಕಿನ ರತ್ನಪುರಿ ಗ್ರಾಮದ ಉದ್ಯಮಿ ನವೀನ ಕುಮಾರ. ಕೇಂದ್ರ

ಪುರಸ್ಕೃತ ಪಿ.ಎಂ.ಎಫ್.ಎಂ.ಇ ಯೋಜನೆ ಮೂಲಕ ಒಟ್ಟು 36 ಲಕ್ಷ ರೂಪಾಯಿ ಸಾಲ ಪಡೆದು ಬೆಂಗಳೂರಿನಲ್ಲಿ ಅಭಯ ನ್ಯಾಚುರಲ್ ಫುಡ್ಸ್ ಕಂಪೆನಿಯ ಮೂಲಕ ಮಾರಾಟ ಮಳಿಗೆಯನ್ನು ಆರಂಭಿಸಿರುವ ಇವರು, 42 ಮೌಲ್ಯವರ್ಧಿತ ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

**ಧ್ವನಿ–ನವೀನ ಕುಮಾರ**

**<><><>**

**ಪ್ರತಿಯೊಬ್ಬರೂ ತಮ್ಮ ತಮ್ಮ** ಕರ್ತವ್ಯಗಳನ್ನು ಪ್ರತಿಫಲಾಪೇಕ್ಷೆಯಿಲ್ಲದೇ ನಿಭಾಯಿಸಬೇಕು. ಈ ಸಂದೇಶವು ಪ್ರತಿಯೊಬ್ಬರಿಗೂ ಅನ್ವಯವಾಗುತ್ತದೆ ಎಂದು  ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಗದಗ ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ  ಭಗವಾನ್ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶ್ರೀ ಕೃಷ್ಣ ಪರಮಾತ್ಮನು ಉಪದೇಶಿಸಿದ ಭಗವದ್ಗೀತೆಯು, ವಿಶ್ವದಲ್ಲಿಯೇ ಅತೀ ಹೆಚ್ಚು ಪ್ರಸಿದ್ಧವಾಗಿವೆ. ಹಿಂದೂ ಸಂಸ್ಕೃತಿಯ ಪವಿತ್ರ ಗ್ರಂಥವಾಗಿದೆ. ಭಗವದ್ಗೀತೆ ಮೂಲಕ ಜನರಿಗೆ ಕೃಷ್ಣ ಪರಮಾತ್ಮ 'ನೀನು ಕರ್ತವ್ಯ ನಿಭಾಯಿಸು. ಪ್ರತಿಫಲ ಭಗವಂತನಿಗೆ ಬಿಡು' ಎಂದು ತಿಳಿಸಿದ್ದಾರೆ ಎಂದರು. **ಭಗವದ್ಗೀತೆಯನ್ನು ನಾವು** ನಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಂಡರೆ ಯಶಸ್ವಿ ಜೀವನ ಸಾಗಿಸಲು ಸಾಧ್ಯವಾಗುತ್ತದೆ ಎಂದು **ಧಾರವಾಡ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ** ಹೇಳಿದ್ದಾರೆ. ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ ಭಗವಾನ ಶ್ರೀ ಕೃಷ್ಣ  ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

**<><><>**